ಕರ್ನಾಟಕ ಸರ್ಕಾರ

ಸಂಖ್ಯೆ: ನಲಇ 28 ಮೈಅಪ್ರಾ 2019 (ಇ-ಕಡತ)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ:11-01-2021

ಸುತ್ತೋಲೆ

ವಿಷಯ: ಬಹುಮಹಡಿ ಕಟ್ಟಡಗಳನ್ನು ನಿರ್ಮಾಣ ಮಾಡುವ ಮುನ್ನ ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯಿಂದ ನಿರಾಕ್ಷೇಪಣಾ ಪತ್ರವನ್ನು ಪಡೆಯುವ ಬಗ್ಗೆ.

ಉಲ್ಲೇಖ: ಪೊಲೀಸ್ ಮಹಾನಿರ್ದೇಶಕರು ಹಾಗೂ ಮಹಾನಿರ್ದೇಶಕರು, ಕರ್ನಾಟಕ ಅಗ್ನಿಶಾಮನ ತುರ್ತು ಸೇವೆಗಳು ಇವರ ಪತ್ರ ದಿ:31.05.2019.

.....

ರಾಜ್ಯದ ಎಲ್ಲಾ ಸ್ಥಳೀಯ ಯೋಜನಾ ಪ್ರದೇಶಗಳ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಕಾರ್ಯ ಕೈಗೊಳ್ಳಬೇಕಾದಲ್ಲಿ ಕಡ್ಡಾಯವಾಗಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರನ್ವಯ ಅನುಮತಿ ಪಡೆದು ಮುಂದಿನ ಕ್ರಮ ವಹಿಸಬೇಕಾಗಿರುತ್ತದೆ. ಸದರಿ ಕಾಯ್ದೆಯಲ್ಲಿ ಸರ್ಕಾರಿ ಕಟ್ಟಡಗಳಿಗೆ ವಿನಾಯಿತಿ ನೀಡಲು ಯಾವುದೇ ಅವಕಾಶ ಇರುವುದಿಲ್ಲ. ಮುಂದುವರೆದು, ಎಲ್ಲಾ ಎತ್ತರಿಸಿದ ಕಟ್ಟಡಗಳನ್ನು ನಿರ್ಮಾಣ ಮಾಡುವ ಮುನ್ನ ಅಗ್ನಿಶಾಮಕ ಇಲಾಖೆಯಿಂದ ನಿರಾಕ್ಷೇಪಣಾ ಪತ್ರ (NOC) ಹಾಗೂ ಕಟ್ಟಡವನ್ನು ಬಳಸುವ ಮುನ್ನ Clearance ಪತ್ರವನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ನಗರಾಭಿವೃದ್ಧಿ ಇಲಾಖೆಯ ಎಲ್ಲಾ ಅಂಗ ಸಂಸ್ಥೆಗಳು ಸರ್ಕಾರದಿಂದ ರಚಿತವಾದ ಸ್ವಾಯತ್ತ ನಿಗಮ, ಮಂಡಳಿ ಮತ್ತು ಪ್ರಾಧಿಕಾರಗಳು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 15 ಮತ್ತು 17 ಗಳನ್ವಯ ಸಕ್ಷಮ ಪ್ರಾಧಿಕಾರದಿಂದ ಅಗತ್ಯ ಅನುಮೋದನೆಗಳನ್ನು ಪಡೆದು ಹಾಗೂ ಎತ್ತರಿಸಿದ ಕಟ್ಟಡಗಳನ್ನು ನಿರ್ಮಿಸಿದಲ್ಲಿ ಅಗ್ನಿಶಾಮಕ ಇಲಾಖೆಯಿಂದ ನಿರ್ಮಾಣ ಪೂರ್ವದಲ್ಲಿ, ನಿರಾಕ್ಷೇಪಣಾ ಪತ್ರ ಹಾಗೂ ಸ್ವಾಧೀನಕ್ಕೆ ಮುನ್ನ Clearance ಪತ್ರವನ್ನು ಪಡೆದುಕೊಂಡು ಭೂ / ಕಟ್ಟಡ ಅಭಿವೃದ್ಧಿಗಳನ್ನು ಕೈಗೊಳ್ಳುವಂತೆ ಸೂಚಿಸಿದೆ.

ಅಲ್ಲದೇ, ಸರ್ಕಾರದ ವಿವಿಧ ಇಲಾಖೆಗಳ ಮುಖ್ಯಸ್ಥರು ತಮ್ಮ ಅಧೀನದಲ್ಲಿರುವ ಅಂಗ ಸಂಸ್ಥೆಗಳು, ಸರ್ಕಾರದಿಂದ ರಚಿತವಾದ ಸ್ವಾಯುತ್ತ ನಿಗಮ, ಮಂಡಳಿ ಮತ್ತು ಪ್ರಾಧಿಕಾರಗಳು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 15 ಮತ್ತು 17 ಗಳನ್ವಯ ಸಕ್ಷಮ ಪ್ರಾಧಿಕಾರದಿಂದ ಅಗತ್ಯ ಅನುಮೋದನೆಗಳನ್ನು ಪಡೆದು ಹಾಗೂ ಎತ್ತರಿಸಿದ ಕಟ್ಟಡಗಳನ್ನು ನಿರ್ಮಿಸಿದಲ್ಲಿ ಅಗ್ನಿಶಾಮಕ ಇಲಾಖೆಯಿಂದ ನಿರ್ಮಾಣ ಪೂರ್ವದಲ್ಲಿ ನಿರಾಕ್ಷೇಪಣಾ ಪತ್ರ ಹಾಗೂ ಸ್ವಾಧೀನಕ್ಕೆ ಮುನ್ನ Clearance ಪತ್ರವನ್ನು ಪಡೆದುಕೊಂಡು ಭೂ / ಕಟ್ಟಡ ಅಭಿವೃದ್ಧಿಗಳನ್ನು ಕೈಗೊಳ್ಳುವಂತೆ ನಿರ್ದೇಶನ ನೀಡುವಂತೆ ಸೂಚಿಸಿದೆ.

11/1/21

457/69

11/1/21

(ಸಿ.ಎಸ್. ಶಿವಕುಮಾರಸ್ವಾಮಿ) 11/1
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ & ನಯೋಸೇ),
ನಗರಾಭಿವೃದ್ಧಿ ಇಲಾಖೆ.

DD/KD/21

ಇವರಿಗೆ,

KLN ಸಂಕಲನಾಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು-ಸದರಿ ಸುತ್ತೋಲೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ, 25 ಪ್ರತಿಗಳನ್ನು, ಈ ಸಚಿವಾಲಯಕ್ಕೆ ಒದಗಿಸುವುದು.

ಪ್ರತಿ:- ಸೂಕ್ತ ಕ್ರಮಕ್ಕಾಗಿ.

1. ಪೊಲೀಸ್ ಮಹಾ ನಿರ್ದೇಶಕರು ಹಾಗೂ ಮಹಾ ನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಹಾಗೂ ರಾಜ್ಯ ವಿಪತ್ತು ನಿರ್ವಹಣಾ ಪಡೆಯ ನಿರ್ದೇಶನಾಲಯ, ನಂ.1, ಅಣ್ಣಾಸ್ವಾಮಿ ಮೊದಲಿಯಾರ್ ರಸ್ತೆ, ಬೆಂಗಳೂರು-560042.

2. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
3. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳ ಆಯುಕ್ತರುಗಳು.
5. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
6. ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳ ಆಯುಕ್ತರುಗಳು.
7. ರಾಜ್ಯದ ಎಲ್ಲಾ ನಗರ ಸಭೆಯ ಪೌರಾಯುಕ್ತರುಗಳ ಮತ್ತು ರಾಜ್ಯದ ಎಲ್ಲಾ ಪುರಸಭೆ ಪಟ್ಟಣ ಪಂಚಾಯಿತಿಗಳ ಮುಖ್ಯಾಧಿಕಾರಿಗಳು.
8. ರಾಜ್ಯದ ಎಲ್ಲಾ ಸ್ಥಳೀಯ ನಗರ ಯೋಜನಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.